# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:- 04/12/2021 ರಂದು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ 60 ಸಗಾಯಪುರಂ ವಾರ್ಡ್ ಸಮಿತಿ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು :**

1. ಶ್ರೀ. ಬಸವರಾಜು ವಾರ್ಡ್ ಸಹಾಯಕ ಅಭಿಯಂತರರು ಮತ್ತು ಸದಸ್ಯ ಕಾರ್ಯದರ್ಶಿ
2. ಶ್ರೀ. ವೆಂಕಟೇಶ್ ಆರೋಗ್ಯ ಪರೀವಿಕ್ಷಕಕರು
3. ಶ್ರೀ. ನಾಗಭೂಷಣ ಆರೋಗ್ಯ ಪರೀವಿಕ್ಷಕಕರು
4. ಶ್ರೀ. ಅಶ್ವತ್ ನಾರಾಯಣ ಆರೋಗ್ಯ ದಪೇದಾರರು
5. ಶ್ರೀ. ಶೇಖರ ತೆರಿಗೆ ಪರೀವಿಕ್ಷಕರು
6. ಶ್ರೀ. ಅಮರೇಶ್ ಕಾನೀಸ್ಟೇಬಲ್
7. ಶ್ರೀ. ಮಂಜುನಾಥ ಕೆಲಸ ಪರೀವಿಕ್ಷಕರು ಬಿ.ಡಬ್ಲೂ.ಎಸ.ಎಸ್.ಬಿ
8. ಶ್ರೀ.ಮತಿ ಅಶ್ವಿನಿ. ಜಿ ಪಿ.ಎಸ್.ಐ ಪುಲಿಕೇಶಿನಗರ ಪೋಲೀಸ್ ಠಾಣೆ
9. ಶ್ರೀ.ಮತಿ ರಮ್ಯ ಡಾಕ್ಟರ್ ಯು.ಪಿ.ಎಚ್.ಸಿ ಹೊಸ ಬಾಗಲೂರು ಬಡಾವಣೆ
10. ಶ್ರೀ. ರಾಜಶೇಖರ್.ಎನ್ ಎ.ಎಸ.ಐ ಕೆ.ಜಿ ಹಳ್ಳಿ ಸಂಚಾರ ಪೋಲೀಸ್ ಠಾಣೆ
11. ಶ್ರೀ. ಸಿ.ಎಮ್ ವೆಂಕಟೇಶ ತೋಟಗಾರಿಕೆ ಕೆಲಸ ನೀರಿಕ್ಷಕರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯ ಕಾರ್ಯದರ್ಶಿ ಅಧಿಕಾರಿ ವಾರ್ಡ್-60 ರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್-60 ರ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಕಛೇರಿಯಲ್ಲಿ ನಡೆಸಲಾಯಿತು.

➢ **ಆರೋಗ್ಯ ಇಲಾಖೆಗೆ ಸಂಬಂದಿಸಿರುವುದು**

- ವಾರ್ಡ್ ವ್ಯಾಪ್ತಿಯ ಹೊಸ ಬಾಗಲೂರು, ಹಳೆ ಬಾಗಲೂರು ಬಡಾವಣೆ ಮತ್ತು ಗಾಸ್ಪಾಲ್ ಸ್ಟ್ರೀಟ್, ಕಸ ನಿರ್ವಹಣೆ ಸರಿಯಾಗಿ ಕಾರ್ಯನಿರ್ವಹಿಸುತ್ತೀಲ್ಲ ಕೂಡಲೆ ಸಮಸ್ಯೆ ಪರಿಹರಿಸಲು ಆರೋಗ್ಯ ಪರೀವಿಕ್ಷಕರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಕಡಿಮೆಯಿದ್ದು ಕೂಡಲೇ ಮಾನ್ಯ ಆಯುಕ್ತರವರಿಗೆ ಪತ್ರ ಬರೆಯಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಅಲ್ಬನ್ಸ್ ಶಾಲೆ ಪಕ್ಕದಲ್ಲಿರುವ ಖಾಲಿ ಜಾಗದಲ್ಲಿ ಡಾಂಪ್ ಮಾಡುತ್ತಿರುವ ಕಸವನ್ನು ಕೂಡಲೇ ತೆರವು ಮಾಡಲು ಸೂಚಿಸಿದರು.

**ಕ್ರಮ: ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸಲು ಸೂಚಿಸಿದರು.**

➢ **ಪೋಲೀಸ್ ಇಲಾಖೆಗೆ (ಟ್ರಾಫಿಕ್) ಸಂಬಂದಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ವಾಹನ ನೀಲುಗಡೆ ಮಾಡುತ್ತಿದ್ದು ಕ್ರಮ ಕೈಗೋಳ್ಳಲು ಸೂಚಿಸಿದರು.

- ವಾರ್ಡ್ ವ್ಯಾಪ್ತಿಯ ರಿಚ್ಚರ್ಡ್ ಪಾರ್ಕ್ ಹತ್ತಿರ ವಾರದ ಅಂತ್ಯದಲ್ಲಿ ಕುದುರೆ ಸವಾರಿಯನ್ನು ನಿಲ್ಲಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಸಂಜೆ ಸಮಯದಲ್ಲಿ ಲಿಂಗರಾಜ್‌ಪುರ ಫ್ಲೈಓವರ್ ಕೆಳಗಡೆ ಪ್ರತಿನಿತ್ಯ ಅಗುವ ಟ್ರಾಫಿಕ್ ಜಾಮ್ ನಿಯಂತ್ರಿಸಲು ಅಧಿಕಾರಿಯನ್ನು ನೇಮಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಪಾಟರಿ ರಸ್ತೆಯಲ್ಲಿನ ಪಾದಾಚಾರಿ ಮಾರ್ಗದಲ್ಲಿ ಹಾಕಿರುವ ರಸ್ತೆ ಡಿವೈಡರ್‌ಗಳನ್ನು ಕೂಡಲೆ ತೆರವುಗೊಳಿಸಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶೀಘ್ರದಲ್ಲೆ ಪರಿಹರಿಸುವಂತೆ ಈ ಸಭೆ ಮುಖಾಂತರ ಸೂಚಿಸಲಾಯಿತು.

➢ <u>ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು</u>

- ವಾರ್ಡ್ ವ್ಯಾಪ್ತಿಯ ರಿಚ್ಚರ್ಡ್ ಟೌನ್‌ನಲ್ಲಿ ಒ.ಎಫ್.ಸಿ ಕೇಬಲ್‌ಗಳನ್ನು ಕೂಡಲೆ ತೇರೆವುಗೋಳಿಸಲು ಸೂಚಿದರು.
- ರಿಚ್ಚರ್ಡ್ ಪಾರ್ಕ್ ಸುತ್ತಮುತ್ತಲಿನ ಪಾದಚಾರಿ ಮಾರ್ಗದಲ್ಲಿನ ಟೈಲ್ಸ್‌ಗಳನ್ನು ಸರಿಪಡಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ರಿಚ್ಚರ್ಡ್ ಟೌನ್ ಸುತ್ತಮುತ್ತಲಿನ ಪ್ರದೇಶದಲ್ಲಿ ಸಿ.ಸಿ. ಕ್ಯಾಮೇರಗಳನ್ನು ಅಳವಡಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಅನಧಿಕೃತ ಕಟ್ಟಡಗಳಿಗೆ ನೋಟೀಸ್ ನೀಡಲು ಸೂಚಿಸಿದರು, ಸಹಾಯಕ ಅಭಿಯಂತರರವರು ಅನಧಿಕೃತ ಕಟ್ಟಡಗಳಿಗೆ ನೋಟೀಸ್ ನೀಡಲಾಗಿದೆ ಎಂದು ಪ್ರತಿಕ್ರಯೆ ನೀಡಿದರು.
- ವಾರ್ಡ್ ವ್ಯಾಪ್ತಿಯ ಚಾರ್ಲ್ಸ್ ಗ್ರೌಂಡ್ ಹಾಗೂ ಪಿಳ್ಳಣ್ಣ ಗಾರ್ಡನ್ ಗ್ರೌಂಡ್ ಭೂಮಿಯ ಮಟ್ಟ ( ಗ್ರೌಂಡ್ ಲೆವೆಲ್) ಸರಿಪಡಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ರಿಚ್ಚರ್ಡ್ ಟೌನ್ ಸುತ್ತಮುತ್ತಲಿನ ಪ್ರದೇಶದಲ್ಲಿ ಟ್ರೀ ಗಾರ್ಡ್‌ಗಳನ್ನು ಸರಿಪಡಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಲಿಂಗರಾಜಪುರ ಫ್ಲೈಓವರ್ ಕೆಳಗಡೆ ವಾಹನ ದಟ್ಟಣೆ ನಿಯಂತ್ರಿಸಲು ರಸ್ತೆಗೆ ಡಿವೈಡರ್ ಅಳವಡಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಕೂಕ್ಸನ್ ರಸ್ತೆ, ರೋಜರ್ಸ್ ರಸ್ತೆ ಮತ್ತು ವಿವಿಯಾನಿ ರಸ್ತೆಯ ಡಾಂಬರೀಕರಣ ಕೆಲಸವನ್ನು ಕೂಡಲೇ ಪೂರ್ಣಗೊಳಿಸಲು ಸೂಚಿಸದರು.
- ವಾರ್ಡ್ ವ್ಯಾಪ್ತಿಯ ಪಿಳ್ಳಣ್ಣ ಗಾರ್ಡ್‌ನ್ ಆಟ್ಟದ ಮೈದಾನ ಬಳಿ ಇರುವ ಅವಶೇಷಗಳನ್ನು ಕೂಡಲೇ ತೆರವುಗೊಳಿಸಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶೀಘ್ರದಲ್ಲೆ ಪರಿಹರಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು ಮತ್ತು ಈ ಮೇಲಿನ ಕಾಮಗಾರಿಗಳನ್ನು ಈಗಾಗಲೇ ಟೇಂಡರ್ ಪ್ರೋಸಸ್‌ನಲ್ಲಿ ಇರುತ್ತವೆ ಹಾಗೂ ಆದ್ಯತೆ ಮೇಲೆ ಕಾರ್ಯನಿರ್ವಹಿಸಲಾಗುವುದು ಎಂದು ಪ್ರತಿಕ್ರಿಯೆ ನೀಡಿದರು.

➢ <u>ಅರಣ್ಯ ಇಲಾಖೆಗೆ ಸಂಬಂದಿಸಿರುವುದು</u>

- ವಾರ್ಡ್ ವ್ಯಾಪ್ತಿಯ ರಿಚ್ಚರ್ಡ್ ಟೌನ್ ಸುತ್ತಮುತ್ತಲಿನ ಮರಗಳಲ್ಲಿನ ನಿರ್ಜೀವವಾದ ರೆಂಬೆ ಕೊಂಬೆಗಳಿದ್ದು ಇವುಗಳನ್ನು ಕೂಡಲೆ ತೇರುವುಗೋಳಿಸಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗೆ ಪರಿಹರಿಸುವಂತೆ ಅರಣ್ಯಾಧಿಕಾರಿಗಳಿಗೆ ಈ ಸಭೆ ಮುಂಖಾಂತರ ಸೂಚಿಸಲಾಯಿತು.

➢ **ಬಿ.ಡಬ್ಲೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು**

- ವಾರ್ಡ್ ವ್ಯಾಪ್ತಿಯ ರೋಜರ್ಸ್ ರಸ್ತೆಯನ್ನು ಮರು ಡಾಂಬರಿಕರಣ ಮಾಡಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಹೊಸ ಬಾಗಲೂರು ಬಡಾವಣೆ, ಹಳೆ ಬಾಗಲೂರು ಬಡಾವಣೆ ಮತ್ತು ಪಿಳ್ಳಣ್ಣ ಗಾರ್ಡನ್ ಸುತ್ತಮುತ್ತಲಿನ ಪ್ರದೇಶದಲ್ಲಿ ಕುಡಿಯುವ ನೀರಿನ ಪುರೈಕೆಯಲ್ಲಿ ವ್ಯತ್ಯವಿದ್ದು ಕೂಡಲೆ ಪರಿಹರಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಸೂಚಿಸಿದರು.**

➢ **ತೋಟಗಾರಿಕೆ ಇಲಾಖೆಗೆ ಸಂಬಂಧಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ ಒಳಪಡುವ ಪಾರ್ಕ್‌ಗಳನ್ನು ನವೀಕರಣ ಹಾಗೂ ಎಲೆ ಕತ್ತರಿಸುವ ಮಿಷನ್‌ನ್ನು (ಶೆಡ್ಡರರ್) ಕೂಡಲೆ ನವೀಕರಣಗೊಳಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸುವಂತೆ ತೋಟಗಾರಿಕೆ ಕೆಲಸ ನೀರಿಕ್ಷಕರಿಗೆ ಸೂಚಿಸಲಾಯಿತು**

➢ **ಪೊಲೀಸ್ ಇಲಾಖೆಗೆ (ಸಿವಿಲ್) ಸಂಬಂದಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ ಗಾಂಜಾ ಹಾಗೂ ಮದ್ಯ ಕುಡಿಯುವುದು ಹಾಗೂ ನಿಲುಗಡೆ ವಾಹನಗಳಿಗೆ ಹಾನಿ ಉಂಟು ಮಾಡುವುದು,... ಇನ್ನೂ ಇತರೆ ಅಸ್ಯೆಂಗಿಕ ಕಾರ್ಯಾಚರಣೆ ನಡೆಯುತ್ತಿದ್ದು ಇವುಗಳ ಮೇಲೆ ಕೂಡಲೆ ಕ್ರಮ ಕೈಗೊಳ್ಳಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕಳ್ಳತನ ಹೆಚ್ಚಾಗುತ್ತಿದ್ದು ಪೊಲೀಸ್ ಬೀಟ್ ಹಾಕುವುದನ್ನು ಹೆಚ್ಚಿಸಲು ಅಧಿಕಾರಿ ವರ್ಗದವರಿಗೆ ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸುವಂತೆ ಈ ಸಭೆ ಮುಖಾಂತರ ಸೂಚಿಸಲಾಯಿತು.**

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

4/12/21

**ನೋಡಲ್ ಅಧಿಕಾರಿ/ ಸದಸ್ಯ ಕಾರ್ಯದರ್ಶಿ**
**ವಾರ್ಡ್–60**

ಪ್ರತಿಗಳನ್ನು:

1. ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ
4. ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ-ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.
10. ಅಧೀಕ್ಷಕರು, (ತೋಟಗಾರಿಕೆ ಇಲಾಖೆ), ರವರ ಮಾಹಿತಿಗಾಗಿ ಸಲ್ಲಿಸಿದೆ.

11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, (ರಸ್ತೆ ಮತ್ತು ಮೂಲಭೂತ ಸೌಕರ್ಯ) ರವರ ಮಾಹಿತಿಗಾಗಿ ಸಲ್ಲಿಸಿದೆ.

12. ಸಹಾಯಕ ಕಾರ್ಯಪಾಲಕ ಅಭಿಯಂತರರು (ಎಲೆಕ್ಟ್ರಿಕಲ್) ಬಿ.ಬಿ.ಎಂ.ಪಿ. ಮೆಯೋಹಾಲ್ ರವರ ಮಾಹಿತಿಗಾಗಿ ಸಲ್ಲಿಸಿದೆ

13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.

14. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.

15. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.

16. ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.

17. ಪೊಲೀಸ್ ಇನ್ಸ್‌ಪೆಕ್ಟರ್(ಟ್ರಾಫಿಕ್) ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.

18. ವಲಯ ಅರಣ್ಯಾಧಿಕಾರಿಗಳು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.

19. ಕಛೇರಿ ಪ್ರತಿ.